ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ವಿ.ಯೋ/31/Placement Cell/2014-15 ದಿನಾಂಕ: 16-03-2017

# ಅಧಿಕೃತ ಜ್ಞಾಪನ ಪತ್ರ

ಕಾಲೇಜು ಶಿಕ್ಷಣ ಇಲಾಖೆಯಿಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪದವಿಯ ನಂತರದ ಹಾಗೂ ಸ್ನಾತಕೋತ್ತರ ಪದವಿಯ ನಂತರದ ಉದ್ಯೋಗಾವಕಾಶಗಳಿಗೆ ಕಾಲೇಜಿನ Placement Cell ಮುಖೇನ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ 2016-17ರ ಶೈಕ್ಷಣಿಕ ವರ್ಷದಲ್ಲಿ ಹಲವು ಆದೇಶಗಳನ್ನು ಹೊರಡಿಸಲಾಗಿತ್ತು..

ತದ ನಂತರ UPSC, KPSC ಸೇರಿದಂತೆ ಹಲವು ಸಂಸ್ಥೆಗಳಿಂದ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳ ಬಗ್ಗೆ, ಕೈಗಾರಿಕೆಗಳಲ್ಲಿನ ಉದ್ಯೋಗಾವಕಾಶಗಳ ಬಗ್ಗೆ, ಸ್ವ-ಉದ್ಯೋಗದ ಬಗ್ಗೆ ಪದವಿಯ ಅಂತಿಮ ವರ್ಷದ ವಿದ್ಯಾರ್ಥಿಗಳ ಹಾಗೂ ಸ್ನಾತಕೋತರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಗಮನಕ್ಕೆ ತರಲು ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅರ್ಜಿಗಳನ್ನು ಸಲ್ಲಿಸುವುದಕ್ಕೆ ಪ್ರೋತ್ಸಾಹಿಸಲು ಆದೇಶಗಳನ್ನು ನೀಡಲಾಗಿತ್ತು.

ಸರ್ಕಾರಕ್ಕೆ 2017ರ ಏಪ್ರಿಲ್ ತಿಂಗಳ ಮಧ್ಯಭಾಗದಲ್ಲಿ 2016-17ರ ಶೈಕ್ಷಣಿಕ ವರ್ಷದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ Placement Cell ಮುಖೇನ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ಬಗ್ಗೆ, ಕಾಲೇಜು/ತಾಲ್ಲೂಕು/ಜಿಲ್ಲಾ/ರಾಜ್ಯ ಮಟ್ಟದಲ್ಲಿ ಆಯೋಜಿಸಿರುವ ಉದ್ಯೋಗ ಮೇಳಗಳ ಬಗ್ಗೆ, ಭಾಗವಹಿಸಿದ ವಿದ್ಯಾರ್ಥಿಗಳ ಸಂಖ್ಯೆ, ವಿವಿಧ ಉದ್ಯೋಗ ನೀಡುವ ಸಂಸ್ಥೆಗಳಿಗೆ ಆಯ್ಕೆಯಾದ ವಿದ್ಯಾರ್ಥಿಗಳ ಬಗ್ಗೆ, ಇತ್ಯಾದಿ ಮಾಹಿತಿಗಳನ್ನು ನೀಡಬೇಕಾಗಿರುವುದರಿಂದ ಸದರಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಹಾಗೂ ಇದಕ್ಕೆ ಸಂಬಂಧಿಸಿದ ದಾಖಲಾತಿಗಳ ಕ್ರೋಢೀಕರಣ ಮಾಡಿಕೊಳ್ಳಲು ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ,

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಗುಲ್ಬರ್ಗಾ, ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
2. ಸಂಬಂಧಪಟ್ಟ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
3. ಸಂಬಂಧಪಟ್ಟ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ Placement Cell ನ ಸಂಚಾಲಕರು – ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
4. ಮಾಹಿತಿ ಅಧಿಕಾರಿಗಳು, ಮಾಹಿತಿ & ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ – ಮಾಹಿತಿಗಾಗಿ ಹಾಗೂ ಆದೇಶವನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
5. ಕಛೇರಿ ಪ್ರತಿ.